MVC No. 316/2021
PW-1 ಶಂಕರನಾಯ್ಕ
Date: 26.02.2026

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲು ಎದುರುದಾರರ ಪರ ಶ್ರೀ ಬಿ ಪಿ ವಕೀಲರಿಂದಃ**

ನಾನು ವೈದ್ಯಕೀಯ ದಾಖಲಾತಿಗಳನ್ನು ಸೃಷ್ಟಿ ಮಾಡಿಕೊಂಡು ಬಂದು ನ್ಯಾಯಾಲಯಕ್ಕೆ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು ನನ್ನ ಜಮೀನಿನಲ್ಲಿ ಈರುಳ್ಳಿ ಬೆಳೆಯುತ್ತಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿದ ಪಹಣಿ ಪತ್ರಿಕೆಯಲ್ಲಿ ಈರುಳ್ಳಿ ಬೆಳೆಯ ಬಗ್ಗೆ ನಮೂದು ಆಗಿಲ್ಲ ಎಂದರೆ ಸಾಕ್ಷಿ ಪಹಣಿ ಪತ್ರಿಕೆಯಲ್ಲಿ ಪ್ರತಿ 6 ತಿಂಗಳಿಗೊಮ್ಮೆ ಬೆಳೆ ಬದಲಾಗುತ್ತದೆ ಎಂದು ನುಡಿದಿರುತ್ತಾರೆ. ಸದರಿ ಜಮೀನನ್ನು ನನ್ನ ಹೆಂಡತಿ ಮತ್ತು ಮಕ್ಕಳು ಕೂಡ ಸಾಗುವಳಿ ಮಾಡುತ್ತಾರೆ ಎಂದರೆ ಸರಿ. ಸಾಕ್ಷಿ ಮುಂದುವರೆದು ನಾನು ಮತ್ತು ನನ್ನ ಹೆಂಡತಿ ಮಾತ್ರ ಸಾಗುವಳಿ ಮಾಡುತ್ತಿದ್ದೇವೆ ಎಂದು ನುಡಿದಿರುತ್ತಾರೆ. ನಾನು ಈಗಲೂ ಜಮೀನು ಸಾಗುವಳಿ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ಎದುರುದಾರರು ನನಗೆ ಪರಿಹಾರ ಕೊಟ್ಟಿದ್ದರು ಕೂಡ ಯಾವುದೇ ಪರಿಹಾರವನ್ನು ನೀಡಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎದುರುದಾರರು ನನಗೆ 25 ಸಾವಿರ ರೂಪಾಯಿ ಹಣವನ್ನು ನೀಡಿದ್ದರು ಕೂಡ ನಾನು ಯಾವುದೇ ಪರಿಹಾರದ ಹಣವನ್ನು ನೀಡಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನೇ ನನ್ನ ತಪ್ಪಿನಿಂದ ಬಿದ್ದು ಗಾಯಮಾಡಿಕೊಂಡಿದ್ದರು ಕೂಡ ಎದುರುದಾರರು ನನಗೆ ಆಸ್ಪತ್ರೆಗೆ ದಾಖಲು ಮಾಡಿದ್ದರು ಎಂದರೆ ಸರಿಯಲ್ಲ. ಅಪಘಾತದ ವಿಷಯವನ್ನು ಸೃಷ್ಟಿ ಮಾಡಿ ಪ್ರಸ್ತುತ ಅರ್ಜಿಯನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು). ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಳ್ಳಕೆರೆ